<u>ಸಿವಿಲ್ ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ,</u>

<u>ಹಗರಿಬೊಮ್ಮನಹಳ್ಳಿ</u>

ಸಿ ಸಿ ನಂ. **450/2024**

<u>ಸಾಕ್ಷಿಗೆ ದಿನಾಂಕ 18-09-2025 ರಂದು ಪ್ರಮಾಣ ವಚನ ಭೋದಿಸಲಾಯಿತು.</u>

C.W.: 2 P.W.: 1

| | | |
|---|---|---|
| ಹೆಸರು | ಃ | ಹುಲಿಕುಂಟಿ ಪರಸಪ್ಪ |
| ತಂದೆಯ ಹೆಸರು | ಃ | ದೊಡ್ಡಪ್ಪ |
| ವಯಸ್ಸು | ಃ | 41 ವರ್ಷ |
| ಉದ್ಯೋಗ | ಃ | ವಾಹನ ಚಾಲಕ |
| ವಾಸ ಸ್ಥಳ | ಃ | ಹೊಸಕೆರೆ ಗ್ರಾಮ |

<u>ಮುಖ್ಯ ವಿಚಾರಣೆ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ-</u>

ನನಗೆ ಆರೋಪಿ ಪರಿಚಯ ಇದೆ ಅವನು ನನ್ನ ಗ್ರಾಮದವನು. ಅವನ ಮೇಲೆ ಏನು ಪ್ರಕರಣ ದಾಖಲಾಗಿದೆ ಅವನು ಯಾವ ಕಾರಣಕ್ಕೆ ನ್ಯಾಯಾಲಯಕ್ಕೆ ಬಂದಿದ್ದಾನೆಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೋಲೀಸರು ಯಾವುದೇ ಪಂಚನಾಮೆ ಜರುಗಿಸಿಲ್ಲ ಮತ್ತು ಯಾವುದೇ ಮು ಮಾಲುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ. ಸಾಕ್ಷಿಗೆ ಒಂದು ದಾಖಲೆ ತೋರಿಸಲಾಗಿ ಅದು ಘಟನಾ ಸ್ಥಳದ ಪಂಚನಾಮೆಯಾಗಿದ್ದು ಸಾಕ್ಷಿಯು ತಾನು ಹೆಬ್ಬೆಟ್ಟಿನ ಸಹಿಯನ್ನು ಮಾಡಿದ್ದೇನೆ ಅದನ್ನು ಹೊಸಕೆರೆ ಬಸ್ ನಿಲ್ದಾಣದ ಬಳಿ ಈಗ ಸುಮಾರು 1 ವರ್ಷದ ಹಿಂದೆ ಪೋಲೀಸರ ಕೋರಿಕೆ ಮೇರೆಗೆ ಮಾಡಿದ್ದೇನೆ. ಸದರಿ ಪಂಚನಾಮೆಯನ್ನು ನಿಪಿ-1 ಎಂದು ಗುರುತಿಸಲಾಯಿತು. ಸದರಿ ದಾಖಲೆಯಲ್ಲಿ ಏನು ಬರೆದಿರುತ್ತಾರೆಂದು ನನಗೆ ಗೊತ್ತಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ.

(ಸಹಾಯಕ ಸರ್ಕಾರಿ ಅಭಿಯೋಜಕರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ನೀಡಲು ಕೇಳಿಕೊಂಡಿದ್ದು ಅನುಮತಿ ನೀಡಲಾಯಿತು.)

<u>ಪಾಟೀ ಸವಾಲುಃ ಸ. ಸ. ಅಭಿಯೋಜಕರವರಿಂದಃ-</u>

ದಿಃ 06-03-2024 ರಂದು ಪೋಲೀಸರು ಸಂಜೆ 5.35 ರಿಂದ 6.15 ಗಂಟೆಯವರೆಗೆ ಹೊಸಕೆರೆ ಗ್ರಾಮದ ಸರ್ಕಾರಿ ಹಿ ಪ್ರಾ ಶಾಲೆ ಹತ್ತಿರ ನನ್ನ ಮತ್ತು ಚಾಸಾ-3 ರವರ ಸಮಕ್ಷಮ ನಿಪಿ-1 ರಂತೆ ಪಂಚನಾಮೆ ಜರುಗಿಸಿ ಆರೋಪಿತನನ್ನು ಬಂಧಿಸಿ ಆತನಿಂದ ಒಂದು ಮಟ್ಕಾ ಪಟ್ಟಿ, ಒಂದು ಬಾಲ್ ಪೆನ್ ಮತ್ತು ನಗದು ಹಣ ರೂ.1050/- ಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ಘಟನಾ ಸ್ಥಳದಲ್ಲಿ ನಾನು ನಿಪಿ-1 ರಲ್ಲಿರುವ

ವಿಚಾರ ತಿಳಿದುಕೊಂಡು ಸದರಿ ದಾಖಲೆಗೆ ಹೆಬ್ಬೆಟ್ಟಿನ ಸಹಿ ಮಾಡಿರುತ್ತೇನೆಂದರೆ ಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರೂ ಸಹಾ ಆರೋಪಿಗೆ ಸಹಾಯ ಮಾಡಲೆಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲು. ಆರೋಪಿ ಪರ ವಕೀಲರಿಂದಃ- ಇಲ್ಲ

ಮರು ವಿಚಾರಣೆ ಇಲ್ಲಃ

(ಮುಕ್ತ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ,

ಸಿವಿಲ್ ಮತ್ತು ಜೆ ಎಂ ಎಫ್ ಸಿ.,
ಹಗರಿಬೊಮ್ಮನಹಳ್ಳಿ